ಸಾಕ್ಷಿದಾರನನ್ನು ಕರೆಸಿ ಪ್ರಮಾಣೀಕರಿಸಲಾಯಿತು. ಪ್ರ.ಮಾ.ದಿಃ 07.07.2022.

**ಮುಖ್ಯ ವಿಚಾರಣೆ – ವಾದಿ ಪರಃ ಶ್ರೀ ಎಸ್. ಎನ್. ಬಿ. ವಕೀಲರಿಂದಃ**

ದಾವೆಗೆ ಸಂಬಂಧಿಸಿದಂತೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ದಾವಾ ಶೆಡ್ಯೂಲ್ ''ಎ'' ಆಸ್ತಿಗಳಿಗೆ ಸಂಬಂಧಪಟ್ಟಂತೆ ಒಟ್ಟು ಎಂಟು ಪಹಣಿ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-8 ಎಂದು, ದಾವಾ ಶೆಡ್ಯೂಲ್ ''ಎ'' ಆಸ್ತಿಗಳಿಗೆ ಸಂಬಂಧಪಟ್ಟಂತೆ ನಾಲ್ಕು ಕೈ ಬರಹ ಪಹಣಿ ಪತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-9 ರಿಂದ ನಿಪಿ- 12 ಎಂದು, ಬ್ಯಾಡಗಿ ತಾಲೂಕು ಮುತ್ತೂರು ಗ್ರಾಮದ ಎಂ. ಆರ್. ಸಂಖ್ಯೆ 1008, 1375, 1432, 1478 ಮತ್ತು 1505 ಗೆ ಸಂಬಂಧಪಟ್ಟಂತೆ ಒಟ್ಟು ಐದು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ -13 ರಿಂದ ನಿಪಿ-17 ಎಂದು, ದಾವಾ ಶೆಡ್ಯೂಲ್ ''ಬ'' ಆಸ್ತಿಗೆ ಸಂಬಂಧಪಟ್ಟಂತೆ ಮುತ್ತೂರು ಗ್ರಾಮ ಪಂಚಾಯತ ಇವರು ನೀಡಿದ ಎರಡು ದೃಢೀಕರಣ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-18 ಮತ್ತು ನಿಪಿ-19 ಎಂದು, ಬಸಪ್ಪ ಗೂಳಪ್ಪ ತೋಟಗೇರ, ಗದಿಗೆಪ್ಪ ಬಸಪ್ಪ ತೋಟಗೇರ ಮತ್ತು ರತ್ನಮ್ಮ ಇವರುಗಳ ಮರಣ ಪ್ರಮಾಣ ಪತ್ರಗಳನ್ನು ಹಾರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-20 ರಿಂದ ನಿಪಿ-22 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು – ಪ್ರತಿವಾದಿ ಪರ ವಕೀಲರಿಂದ.**

ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ.

ಸಹಿ/-

ದಿವಾಣಿ ನ್ಯಾಯಾಧೀಶರು,

ಬ್ಯಾಡಗಿ.